All India Radio: Bangalore
National Bulletin In Kannada
28.12.2025 7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><*><><<>

ಮುಖ್ಯಾಂಶಗಳು

೧. 'ಮನ್ ಕಿ ಬಾತ್' ನ ೧೨೯ನೇ ಆವೃತ್ತಿಯಲ್ಲಿಂದು ಸಮಸ್ತ ಭಾರತೀಯರನ್ನುದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಭಾಷಣ

೨. ರಾಷ್ಟ್ರಪತಿ ದ್ರೌಪದಿ ಮುರ್ಮು ಮೂರು ರಾಜ್ಯಗಳ ಪ್ರವಾಸ; ಇಂದು ಕರ್ನಾಟಕದ ಕಾರವಾರದಲ್ಲಿರುವ ಐಎನ್‌ಎಸ್ ಕದಂಬ ನೌಕಾ ನೆಲೆಗೆ ಭೇಟಿ

೩. ನವದೆಹಲಿಯಲ್ಲಿಂದು ಐದನೇ ಪ್ರಧಾನಕಾರ್ಯದರ್ಶಿಗಳ ರಾಷ್ಟ್ರೀಯ ಸಮ್ಮೇಳನದ ಅಧ್ಯಕ್ಷತೆ ವಹಿಸಲಿರುವ ಪ್ರಧಾನಿ

೪. ಅರಾವಳಿ ಬೆಟ್ಟಗಳ ವ್ಯಾಖ್ಯಾನ ಕಳವಳಗಳ ಕುರಿತು ನಾಳೆ ಸ್ವಯಂಪ್ರೇರಿತ ವಿಚಾರಣೆ ನಡೆಸಲಿರುವ ಸುಪ್ರೀಂ ಕೋರ್ಟ್

೫. ಐಸಿಸಿ ಪುರುಷರ ೧೯ ವರ್ಷದೊಳಗಿನವರ ವಿಶ್ವಕಪ್‌ಗಾಗಿ ೧೫ ಸದಸ್ಯರ ತಂಡ ಪ್ರಕಟಿಸಿದ ಬಿಸಿಸಿಐ

<><><*><><<>

ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ಇಂದು ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೨೯ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮವು ಎಲ್ಲಾ ಆಕಾಶವಾಣಿ ಮತ್ತು ದೂರದರ್ಶನ ವಾಹಿನಿಗಳು, ಆಕಾಶವಾಣಿ ಸುದ್ದಿ ವೆಬ್‌ಸೈಟ್ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಇದನ್ನು ಆಕಾಶವಾಣಿ ಜಾಲತಾಣ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ನೇರ ಪ್ರಸಾರವಾಗಲಿದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಮೂಡಿ ಬರಲಿದೆ.

<><><*><><<>

ಗೋವಾ, ಕರ್ನಾಟಕ ಮತ್ತು ಜಾರ್ಖಂಡ್, ಮೂರು ರಾಜ್ಯಗಳ ನಾಲ್ಕು ದಿನಗಳ ಪ್ರವಾಸದಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಕರ್ನಾಟಕದ ಕಾರವಾರದಲ್ಲಿರುವ ಐಎನ್‌ಎಸ್ ಕದಂಬ ನೌಕಾ ನೆಲೆಗೆ ಭೇಟಿ ನೀಡಲಿದ್ದಾರೆ. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ರಾಷ್ಟ್ರಪತಿಗಳನ್ನು ಬರಮಾಡಿಕೊಳ್ಳಲಿದ್ದಾರೆ. ನೌಕಾ ನೆಲೆ ಭೇಟಿ ನಂತರ ರಾಷ್ಟ್ರಪತಿ ಅವರು, ಕಾರವಾರ ನೌಕಾ

ನೆಲೆಯಿಂದ ಜಲಾಂತಾರ್ಗಾಮಿ ನೌಕೆಯಲ್ಲಿ ಪ್ರಯಾಣಿಸಲಿದ್ದಾರೆ. ಈ ಮೂಲಕ ಅವರು, ಸಬ್‌ಮೆರಿನ್‌ನಲ್ಲಿ ಪ್ರಯಾಣಿಸಿದ ಎರಡನೇ ರಾಷ್ಟ್ರಪತಿ ಆಗಲಿದ್ದಾರೆ. ರಾಷ್ಟ್ರಪತಿ ಆಗಿದ್ದ ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ಅವರು ೨೦೦೬ರಲ್ಲಿ ವಿಶಾಖಪಟ್ಟಣಂನಲ್ಲಿ ಜಲಾಂತರ್ಗಾಮಿ ನೌಕೆಯಲ್ಲಿ ಪ್ರಯಾಣಿಸಿದ್ದರು. ನಾಳೆ ಜಾರ್ಖಂಡ್‌ನ ಜಮ್‌ಶೆಡ್‌ಪುರದಲ್ಲಿ ನಡೆಯಲಿರುವ ಓಲ್ ಚಿಕಿ ಲಿಪಿಯ ಶತಮಾನೋತ್ಸವ ಸಮಾರಂಭದಲ್ಲಿ ರಾಷ್ಟ್ರಪತಿ ಅವರು ಭಾಗವಹಿಸಲಿದ್ದಾರೆ. ಅದೇ ದಿನ, ಜಮ್‌ಶೆಡ್‌ಪುರದ ರಾಷ್ಟ್ರೀಯ ತಂತ್ರಜ್ಞಾನ ಸಂಸ್ಥೆ-ಎನ್‌ಐಟಿ ೧೫ನೇ ಘಟಿಕೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ಇದೇ ೩೦ ರಂದು ಅವರು ದುಮ್ಲಾದಲ್ಲಿ ನಡೆಯುವ ಅಂತಾರಾಜ್ಯ ಜನಸಾಂಸ್ಕೃತಿಕ ಸಮಾಗಮದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

<>><><*><><<>

ಪ್ರಧಾನಿ ನರೇಂದ್ರ ಮೋದಿ ಇಂದು ನವದೆಹಲಿಯಲ್ಲಿ ನಡೆಯಲಿರುವ ಐದನೇ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಗಳ ಸಮ್ಮೇಳನದ ಅಧ್ಯಕ್ಷತೆ ವಹಿಸಲಿದ್ದಾರೆ. ನಿನ್ನೆ ಕೂಡ ಅವರು ಸಭೆಯ ಅಧ್ಯಕ್ಷತೆ ವಹಿಸಿದ್ದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ಸಮ್ಮೇಳನದ ಸಮಯದಲ್ಲಿ, ಆಡಳಿತ ಮತ್ತು ಸುಧಾರಣೆಗಳಿಗೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಒಳನೋಟವುಳ್ಳ ಚರ್ಚೆಗಳನ್ನು ನಡೆಸಲಾಗಿದೆ ಎಂದು ತಿಳಿಸಿದ್ದಾರೆ. ಈ ತಿಂಗಳ ೨೬ ರಂದು ಪ್ರಾರಂಭವಾದ ಮೂರು ದಿನಗಳ ಸಮ್ಮೇಳನವು ರಾಷ್ಟ್ರೀಯ ಅಭಿವೃದ್ಧಿ ಆದ್ಯತೆಗಳ ಕುರಿತು ರಚನಾತ್ಮಕ ಮತ್ತು ನಿರಂತರ ಸಂವಾದದ ಮೂಲಕ ಕೇಂದ್ರ-ರಾಜ್ಯ ಪಾಲುದಾರಿಕೆಯನ್ನು ಬಲಪಡಿಸುವ ಗುರಿಯನ್ನು ಹೊಂದಿದೆ. ಸಹಕಾರಿ ಒಕ್ಕೂಟದ ಪ್ರಧಾನ ಮಂತ್ರಿಯವರ ದೃಷ್ಟಿಕೋನದಲ್ಲಿ ನೆಲೆಗೊಂಡಿರುವ ಈ ಸಮ್ಮೇಳನವು, ಕೇಂದ್ರ ಮತ್ತು ರಾಜ್ಯಗಳು ಸಹಕರಿಸುವ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ, ದೇಶದ ಮಾನವ ಬಂಡವಾಳ ಸಾಮರ್ಥ್ಯವನ್ನು ವೃದ್ಧಿಸಲು ಹಾಗೂ ಸಮಗ್ರ ಮತ್ತು ಭವಿಷ್ಯಕ್ಕೆ ಸಿದ್ಧವಾಗಿರುವ ಬೆಳವಣಿಗೆಯನ್ನು ವೇಗಗೊಳಿಸಲು ಏಕೀಕೃತ ಮಾರ್ಗಸೂಚಿಯನ್ನು ವಿನ್ಯಾಸಗೊಳಿಸುತ್ತದೆ. ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ಅನುಸರಿಸಬೇಕಾದ ಅತ್ಯುತ್ತಮ ಅಭ್ಯಾಸಗಳು ಮತ್ತು ತಂತ್ರಗಳನ್ನು ಒಳಗೊಂಡ 'ವಿಕಸಿತ ಭಾರತಕ್ಕಾಗಿ ಮಾನವ ಬಂಡವಾಳ' ಎಂಬ ವಿಷಯದ ಮೇಲೆ ಈ ಸಭೆ ಕೇಂದ್ರೀಕೃತವಾಗಿದೆ. ಈ ವಿಷಯದ ಅಡಿಯಲ್ಲಿ, ಆರಂಭಿಕ ಬಾಲ್ಯ ಶಿಕ್ಷಣ, ಶಾಲಾ ಶಿಕ್ಷಣ, ಕೌಶಲ್ಯ, ಉನ್ನತ ಶಿಕ್ಷಣ, ಕ್ರೀಡೆ ಮತ್ತು ಪಠ್ಯೇತರ ಚಟುವಟಿಕೆಗಳು ಸೇರಿದಂತೆ ಐದು ಪ್ರಮುಖ ಕ್ಷೇತ್ರಗಳ ಮೇಲೆ ವಿವರವಾದ ಚರ್ಚೆಗೆ ವಿಶೇಷ ಒತ್ತು ನೀಡಲಾಗುತ್ತಿದೆ. ಸಮ್ಮೇಳನವು ಆಡಳಿತ, ತಂತ್ರಜ್ಞಾನ, ಪೂರೈಕೆ ಸರಪಳಿಗಳು ಮತ್ತು ಮಾರುಕಟ್ಟೆ ಸಂಪರ್ಕ ಸೇರಿದಂತೆ ಪ್ರಮುಖ ವಿಷತಗಳ ಕುರಿತು ಆರು ವಿಶೇಷ ಅಧಿವೇಶನಗಳನ್ನು ಒಳಗೊಂಡಿದೆ.

<>><><*><><<>

ಅರಾವಳಿ ಬೆಟ್ಟಗಳ ವ್ಯಾಖ್ಯಾನದಲ್ಲಿನ ಇತ್ತೀಚಿನ ಬದಲಾವಣೆಯಿಂದ ಉಂಟಾದ ಕಳವಳಗಳನ್ನು ಸುಪ್ರೀಂ ಕೋರ್ಟ್ ಸ್ವಯಂಪ್ರೇರಿತವಾಗಿ ಪರಿಗಣಿಸಿದೆ. ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ

ಸೂರ್ಯ ಕಾಂತ್, ನ್ಯಾಯಮೂರ್ತಿಗಳಾದ ಜೆ.ಕೆ.ಮಹೇಶ್ವರಿ ಮತ್ತು ಎ.ಜಿ.ಮಸಿಹ್ ಅವರನ್ನೊಳಗೊಂಡ ರಜಾ ಪೀಠವು ನಾಳೆ ಈ ವಿಷಯವನ್ನು ಪರಿಶೀಲಿಸಲಿದೆ. ಅರಾವಳಿ ಬೆಟ್ಟಗಳ ಮರುವ್ಯಾಖ್ಯಾನದ ಬಗ್ಗೆ ಸಾರ್ವಜನಿಕ ಪ್ರತಿಭಟನೆಗಳು ಮತ್ತು ಬಲವಾದ ಆಕ್ಷೇಪಣೆಗಳ ಬೆನ್ನಲ್ಲೆ ಸುಪ್ರೀಂ ಕೋರ್ಟ್ ಮಧ್ಯಪ್ರವೇಶಿಸಿದೆ. ಸ್ವೀಕೃತ ವ್ಯಾಖ್ಯಾನದ ಅಡಿಯಲ್ಲಿ, ಕನಿಷ್ಠ ೧೦೦ ಮೀಟರ್ ಎತ್ತರವಿರುವ ನಿರ್ದಿಷ್ಟ ಜಿಲ್ಲೆಗಳಲ್ಲಿನ ಯಾವುದೇ ಭೂಪ್ರದೇಶ, ಅರಾವಳಿ ಬೆಟ್ಟಗಳು ಎಂದು ಪರಿಗಣಿಸಲಾಗಿದೆ. ಈ ವ್ಯಾಖ್ಯಾನ ಪರಿಸರ ವ್ಯವಸ್ಥೆಯನ್ನು ದುರ್ಬಲಗೊಳಿಸುವ ಸಾಧ್ಯತಿಯಿದೆ ಎಂದು ವಿವಿಧ ಪರಿಸರ ಪರ ಸಂಸ್ಥೆಗಳು ಎಚ್ಚರಿಸಿವೆ.

<>><><*><><<>

ಉನ್ನಾವೊ ಅತ್ಯಾಚಾರ ಪ್ರಕರಣದಲ್ಲಿ ಉತ್ತರ ಪ್ರದೇಶದ ಮಾಜಿ ಶಾಸಕ ಕುಲದೀಪ್ ಸಿಂಗ್ ಸೆಂಗಾರ್ ಅವರಿಗೆ ನೀಡಲಾದ ಜೀವಾವಧಿ ಶಿಕ್ಷೆಯನ್ನು ಅಮಾನತುಗೊಳಿಸಿದ ದೆಹಲಿ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಕೇಂದ್ರೀಯ ತನಿಖಾ ದಳ ಸಲ್ಲಿಸಿರುವ ಅರ್ಜಿಯನ್ನು ಸುಪ್ರೀಂ ಕೋರ್ಟ್‌ನ ಮೂವರು ನ್ಯಾಯಮೂರ್ತಿಗಳ ಪೀಠವು ನಾಳೆ ವಿಚಾರಣೆ ನಡೆಸಲಿದೆ. ಈ ಪ್ರಕರಣವನ್ನು ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್, ನ್ಯಾಯಮೂರ್ತಿಗಳಾದ ಜೆ.ಕೆ.ಮಹೇಶ್ವರಿ ಮತ್ತು ಅಗಸ್ಟೀನ್ ಜಾರ್ಜ್ ಮಸಿಹ್ ಅವರನ್ನೊಳಗೊಂಡ ರಜಾ ಪೀಠ ವಿಚಾರಣೆ ನಡೆಸಲಿದೆ. ಚಳಿಗಾಲದ ರಜೆಗಾಗಿ ನ್ಯಾಯಾಲಯವನ್ನು ಪ್ರಸ್ತುತ ಮುಚ್ಚಲಾಗಿದ್ದು, ಜನವರಿ ೫ ರಂದು ಮಾತ್ರ ನಿಯಮಿತ ವಿಚಾರಣೆ ಪುನರಾರಂಭವಾಗಲಿದೆ.

<>><><*><><<>

ಮ್ಯಾನ್ಮಾರ್‌ನಲ್ಲಿ ಮೂರು ಹಂತದ ಸಾರ್ವತ್ರಿಕ ಚುನಾವಣೆಯ ಮೊದಲ ಹಂತದ ಚುನಾವಣೆಗೆ ಮತದಾನ ಇಂದು ನಡೆಯುತ್ತಿದೆ. ೨೦೨೧ ರಲ್ಲಿ ನೊಬೆಲ್ ಪ್ರಶಸ್ತಿ ವಿಜೇತ ಆಂಗ್ ಸಾನ್ ಸೂ ಕಿ ಅವರ ಸರ್ಕಾರವನ್ನು ಸೇನೆಯು, ಉರುಳಿಸಿದ ನಂತರ, ಇದು ಐದು ವರ್ಷಗಳಲ್ಲಿ ನಡೆಯುತ್ತಿರುವ ಮೊದಲ ಚುನಾವಣೆಯಾಗಿದೆ. ಮ್ಯಾನ್ಮಾರ್‌ನ ವಿವಿಧ ಭಾಗಗಳಲ್ಲಿ ಮೂರು ಹಂತಗಳಲ್ಲಿ ಮತದಾನ ನಡೆಯಲಿದ್ದು, ಎರಡನೇ ಹಂತದ ಮತದಾನ ಜನವರಿ ೧೧ ರಂದು ನಡೆಯಲಿದ್ದು, ಮೂರನೇ ಹಂತದ ಮತದಾನ ಜನವರಿ ೨೫ ರಂದು ನಡೆಯಲಿದೆ. ಇಂದು ಅಲ್ಲಿನ ೩೩೦ ಪಟ್ಟಣಗಳ ಪೈಕಿ ೧೦೨ ಪಟ್ಟಣಗಳಲ್ಲಿ ಮತದಾನ ನಡೆಯಲಿದೆ. ೫೬ ಪಟ್ಟಣಗಳಲ್ಲಿ ಮತದಾನವನ್ನು ರದ್ದುಗೊಳಿಸಲಾಗಿದೆ.

<>><><*><><<>

ಕಾಂಗ್ರೆಸ್ ಪಕ್ಷವು, ಚುನಾವಣಾ ಲಾಭಕ್ಕಾಗಿ ಮಾತ್ರ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆ-೨೦೦೫ ರಲ್ಲಿ ಮಹಾತ್ಮ ಗಾಂಧಿಯವರ ಹೆಸರನ್ನು ಸೇರಿಸಿದೆ ಎಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಆರೋಪಿಸಿದ್ದಾರೆ. ನಿನ್ನೆ ಭೂಪಾಲ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ, ಮನ್ರೇಗಾ ಭ್ರಷ್ಟಾಚಾರದ ಮೂಲವಾಗಿತ್ತು ಎಂದು ಹೇಳಿದರು. ಕಾಂಗ್ರೆಸ್ ಪಕ್ಷವು ಮನ್ರೇಗಾ ಯೋಜನೆಯ

ಬಜೆಟ್ ಅನ್ನು ಪದೇ ಪದೇ ಕಡಿಮೆ ಮಾಡಿದೆ. ವಿರೋಧ ಪಕ್ಷಗಳು ಚುನಾವಣಾ ಲಾಭಕ್ಕಾಗಿ ಮಹಾತ್ಮ ಗಾಂಧಿಯವರ ಹೆಸರನ್ನು ನಿರಂತರವಾಗಿ ಬಳಸುತ್ತಿವೆ ಎಂದು ಅವರು ಆರೋಪಿಸಿದರು. 'ವಿಕಸಿತ ಭಾರತ  ಜಿ ರಾಮ್ ಜಿ' ಯೋಜನೆಯಡಿ, ಇನ್ನು ಮುಂದೆ ನಿರ್ಧಾರಗಳನ್ನು ದೆಹಲಿಯಲ್ಲಿ ತೆಗೆದುಕೊಳ್ಳಲಾಗುವುದಿಲ್ಲ, ಬದಲಿಗೆ ಗ್ರಾಮ ಮಟ್ಟದಲ್ಲಿ ತೆಗೆದುಕೊಳ್ಳಲಾಗುವುದು ಎಂದು ನಿರ್ಧರಿಸಲಾಗಿದೆ. ಗ್ರಾಮ ಪಂಚಾಯತ್‌ಗಳು ಒಟ್ಟಾಗಿ ಕುಳಿತು ತಮ್ಮದೇ ಆದ ಅಭಿವೃದ್ಧಿ ಯೋಜನೆಗಳನ್ನು ಸಿದ್ಧಪಡಿಸಲಿವೆ. ಖಾತರಿಪಡಿಸಿದ ಕೆಲಸದ ದಿನಗಳ ಸಂಖ್ಯೆಯನ್ನು ೧೦೦ ರಿಂದ ೧೨೫ ದಿನಗಳಿಗೆ ಹೆಚ್ಚಿಸಲಾಗಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮಾಹಿತಿ ನೀಡಿದರು.

<>><><*><><<>

ಮುಂದಿನ ವರ್ಷದ ಜನವರಿ ೧೫ ರಿಂದ ಫೆಬ್ರವರಿ ೬ ರವರೆಗೆ ಜಿಂಬಾಬ್ವೆ ಮತ್ತು ನಮೀಬಿಯಾದಲ್ಲಿ ನಡೆಯಲಿರುವ ಐಸಿಸಿ ಪುರುಷರ ೧೯ ವರ್ಷದೊಳಗಿನವರ ವಿಶ್ವಕಪ್‌ಗಾಗಿ ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ-ಬಿಸಿಸಿಐ ೧೫ ಸದಸ್ಯರ ತಂಡವನ್ನು ಪ್ರಕಟಿಸಿದೆ. ತಂಡವನ್ನು ಆಯುಷ್ ಮ್ಹಾತ್ರೆ ಮುನ್ನಡೆಸಲಿದ್ದು, ವಿಹಾನ್ ಮಲ್ಹೋತ್ರಾ ಉಪನಾಯಕರಾಗಿರುತ್ತಾರೆ. ಇನ್ನು, ವೈಭವ್ ಸೂರ್ಯವಂಶಿ, ಆರನ್ ಜಾರ್ಜ್ ಮತ್ತು ಅಭಿಗ್ಯಾನ್ ಕುಂಡು ಕೂಡ ತಂಡದ ಭಾಗವಾಗಿದ್ದಾರೆ.  ಐದು ಬಾರಿ ಚಾಂಪಿಯನ್ ಆಗಿರುವ ಭಾರತ ತಂಡವು ನ್ಯೂಜಿಲೆಂಡ್, ಯುಎಸ್‌ಎ ಮತ್ತು ಬಾಂಗ್ಲಾದೇಶದ ಜೊತೆಗೆ ಬಿ ಗುಂಪಿನಲ್ಲಿ ಸ್ಥಾನ ಪಡೆದಿದೆ. ಭಾರತವು ಜನವರಿ ೧೫ ರಂದು ಬುಲವಾಯೊದ ಕ್ವೀನ್ಸ್ ಸ್ಪೋರ್ಟ್ಸ್ ಕ್ಲಬ್‌ನಲ್ಲಿ ನಡೆಯಲಿರುವ ಪಂದ್ಯದಲ್ಲಿ ಅಮೆರಿಕ ವಿರುದ್ಧ ತನ್ನ ಅಭಿಯಾನವನ್ನು ಪ್ರಾರಂಭಿಸಲಿದೆ. ಜನವರಿ ೩ ರಿಂದ ಪ್ರಾರಂಭವಾಗುವ ದಕ್ಷಿಣ ಆಫ್ರಿಕಾ ವಿರುದ್ಧದ ಮೂರು ಪಂದ್ಯಗಳ ಏಕದಿನ ಸರಣಿಗೂ ಬಿಸಿಸಿಐ ಕಿರಿಯರ ಕ್ರಿಕೆಟ್ ಸಮಿತಿಯು ಭಾರತ ೧೯ ವರ್ಷದೊಳಗಿನವರ ತಂಡವನ್ನು ಪ್ರಕಟಿಸಿದೆ. ಈ ತಂಡವನ್ನು ವೈಭವ್ ಸೂರ್ಯವಂಶಿ ಮುನ್ನಡೆಸಲಿದ್ದು, ಆರನ್ ಜಾರ್ಜ್ ಉಪನಾಯಕರಾಗಿರುತ್ತಾರೆ. ಆಯುಷ್ ಮ್ಹಾತ್ರೆ ಮತ್ತು ವಿಹಾನ್ ಮಲ್ಹೋತ್ರಾ ಮಣಿಕಟ್ಟಿನ ಗಾಯಗಳಿಂದ ಬಳಲುತ್ತಿದ್ದು, ದಕ್ಷಿಣ ಆಫ್ರಿಕಾ ಪ್ರವಾಸದಿಂದ ಹೊರಗುಳಿಯಲಿದ್ದಾರೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ><><<>